ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಹನ್ನೆರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 8ನೇ ಫೆಬ್ರವರಿ, 2012

(ಸಮಯ: ಬೆಳಿಗ್ಗೆ 11.00 ಗಂಟೆಗೆ)

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

ಆ) ದಿನಾಂಕ 03.02.2012ರ ನಾಲ್ಕನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ರಾಜಶೇಖರ ಬಸವರಾಜ ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 57(482) : ಕೃಷಿ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆಗೆ ಉತ್ತರ

1. ಶ್ರೀಯುತರಾದ ಸಿದ್ದರಾಮಯ್ಯ, ಟಿ.ಬಿ. ಜಯಚಂದ್ರ, ವಿ.ಶ್ರೀನಿವಾಸಪ್ರಸಾದ್, ಡಾ: ಹೆಚ್.ಸಿ. ಮಹಾದೇವಪ್ಪ, ರಾಜಶೇಖರ ಪಾಟೀಲ್ ಹಾಗೂ ಇತರರು ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಅಕ್ರಮವಾಗಿ ಕಬ್ಬಿಣದ ಅದಿರನ್ನು ರಫ್ತು ಮಾಡಿರುವ ಬಗ್ಗೆ ಲೋಕಾಯುಕ್ತವು ಸರ್ಕಾರಕ್ಕೆ ಅಂತಿಮ ವರದಿಯನ್ನು ಸಲ್ಲಿಸಿದ್ದು ಸದರಿ ಗಣಿಗಾರಿಕೆಯಲ್ಲಿ ರಾಜಕಾರಣಿಗಳು ಹಾಗೂ ಅಧಿಕಾರಿಗಳು ಶಾಮೀಲಾಗಿದ್ದು ಸಾವಿರಾರು ಕೋಟಿ ರೂಪಾಯಿ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗಿರುವುದಾಗಿ ವರದಿಯಲ್ಲಿ ತಿಳಿಸಿದ್ದು, ಸದರಿ ವರದಿಯಲ್ಲಿನ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

2. ಶ್ರೀಯುತರಾದ ಹೆಚ್.ಡಿ. ರೇವಣ್ಣ, ಸಿ.ಎಸ್. ಪುಟ್ಟೇಗೌಡ, ಎಂ.ಟಿ. ಕೃಷ್ಣಪ್ಪ, ವೆಂಕಟರಾವ್ ನಾಡಗೌಡ ಮತ್ತು ಸುನೀಲ ವಿ ಹೆಗ್ಗಡೆ ಹಾಗೂ ಇತರರು ರಾಜ್ಯ ಸರ್ಕಾರ ಈಗಾಗಲೇ ನೂರು ತಾಲ್ಲೂಕುಗಳನ್ನು ಬರಗಾಲ ಪ್ರದೇಶವೆಂದು ಘೋಷಿಸಿರುವುದು ಹಾಗೂ ಬರಗಾಲ ಪ್ರದೇಶದಲ್ಲಿ ರೈತರು ಬೆಳೆದ ಬೆಳೆಗಳು ನಾಶವಾಗಿದ್ದು ಹಾಗೂ ರೈತರು ಬೆಳೆದ ಬೆಳೆಗಳ ಬೆಲೆಗಳು ಕುಸಿದಿರುವುದರಿಂದ ರೈತರು ಭಾರಿ ನಷ್ಟವನ್ನು ಅನುಭವಿಸುತ್ತಿದ್ದು, ಇದರಿಂದಾಗಿ ರೈತರು ಆತ್ಮಹತ್ಯೆಗೆ ಶರಣಾಗುತ್ತಿರುವುದರಿಂದ ಉಂಟಾಗಿರುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಮುಂದುವರೆದ ಚರ್ಚೆ.

ಮು.ತಿ.ನೋ.

3. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕಿಮ್ಮನೆ ರತ್ನಾಕರ್ ಅವರು ತೀರ್ಥಹಳ್ಳಿ ಕ್ಷೇತ್ರದ ಕೋಣಂದೂರು ಸಮೀಪ ಮಂಗನ ಕಾಯಿಲೆ ವ್ಯಾಪಿಸಿದ್ದು ಆ ಭಾಗದ ಜನ ತೊಂದರೆ ಅನುಭವಿಸುತ್ತಿರುವ ಬಗ್ಗೆ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2. ಶ್ರೀ ಕೆ. ಅಭಯಚಂದ್ರ ಅವರು ಮಂಗಳೂರು ಮೂಡಬಿದ್ರೆ ಮಾರ್ಗವಾಗಿ ಹಾದುಹೋಗುವ ರಾಷ್ಟ್ರೀಯ ಹೆದ್ದಾರಿ 13ರ ಮಿಜಾರು ಬೊಳೆಚಾರುನಲ್ಲಿ ಇರುವ ಹಳೆ ಸೇತುವೆ ಮುರಿದು ಹೋಗಿರುವುದರಿಂದ ಸೇತುವೆ ಪುನರ್ ನಿರ್ಮಾಣ ಮಾಡುವವರೆಗೆ ಸರ್ಕಾರ ಲೋಕೋಪಯೋಗಿ ಇಲಾಖೆ ವತಿಯಿಂದ ಸೇತುವೆ ನಿರ್ಮಾಣ ಮಾಡುವ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

3. ಶ್ರೀ ಬಿ.ಬಿ. ರಾಮಸ್ವಾಮಿಗೌಡ ಅವರು ಕರ್ನಾಟಕ ಭೂ–ಕಂದಾಯ ನಿಯಮಗಳು 1966ರ ನಿಯಮಗಳನ್ನು ಮುಂದಿಟ್ಟು ಸುತ್ತೋಲೆಯನ್ನು ಹೊರಡಿಸಿ, ಭೂ–ಮಂಜೂರಾತಿ ಸಮಿತಿ (ಬಗರ್‌ಹುಕುಂ)ಯು ಯಾವುದೇ ಕಾರ್ಯವೆಸಗದ ರೀತಿ ಅಡ್ಡಿಪಡಿಸಿರುವ ಬಗ್ಗೆ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

4. ಶ್ರೀ ಜೆ.ಡಿ. ನಾಯ್ಕ ಅವರು ದಿನಾಂಕ 27.11.2011 ಮಧ್ಯರಾತ್ರಿಯೆಂದು ಭಟ್ಕಳ ತಾಲ್ಲೂಕಿನ ಬೇಳ್ಕಿ, ಮುರ್ಡೇಶ್ವರ ಮತ್ತು ಬೈಲೂರಿನಲ್ಲಿ ಸಮುದ್ರದ ನೀರು ಉಕ್ಕಿ, ಸುನಾಮಿ ರೀತಿಯಲ್ಲಿ ದಡದಲ್ಲಿ ನಿಲ್ಲಿಸಿದ್ದ ಬಹಳಷ್ಟು ಮೀನುಗಾರಿಕಾ ದೋಣಿಗಳು ಹಾಗೂ ಬಲೆಗಳು ಒಡೆದು, ಮೀನುಗಾರರಿಗೆ ನಷ್ಟ ಉಂಟಾಗಿದ್ದು, ನೊಂದ ಮೀನುಗಾರರಿಗೆ ಪರಿಹಾರ ನೀಡುವ ಬಗ್ಗೆ ಮೀನುಗಾರಿಕೆ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

5. ಶ್ರೀ ಎನ್. ಸಂಪಂಗಿ ಅವರು ಡಾ|| ನಂಜುಂಡಪ್ಪರವರ ವರದಿಯ ಪ್ರಕಾರ ಅತ್ಯಂತ ಹಿಂದುಳಿದ ಪ್ರದೇಶವೆಂದು ಪರಿಗಣಿಸಲ್ಪಟ್ಟಿರುವ ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕುಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತ, ಹಿಂದುಳಿದ ವರ್ಗಕ್ಕೆ ಸೇರಿದ ಪದವಿ ಪೂರ್ವ ಮತ್ತು ಪದವಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಊಟ ವ್ಯವಸ್ಥೆಯನ್ನು ವಿಸ್ತರಿಸುವ ವಿಷಯದ ಬಗ್ಗೆ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

6. ಶ್ರೀ ಎಸ್. ಆರ್. ವಿಶ್ವನಾಥ ಅವರು ಅಕ್ರಮ–ಸಕ್ರಮ ಯೋಜನೆಯಡಿ ಭೂ ಮಂಜೂರಾತಿ ಮಾಡಲು ಈ ಹಿಂದೆ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಿಂದ 18 ಕಿ.ಮೀ ಪರಿಮಿತಿಯನ್ನು ನಿಗದಿಪಡಿಸಲಾಗಿತ್ತು. ಇತ್ತೀಚಿನ ಆದೇಶದಲ್ಲಿ ಸದರಿ 18 ಕಿ.ಮೀ ಬದಲಾಗಿ 25 ಕಿ.ಮೀ ಎಂದು ಬದಲಾಯಿಸಲಾಗಿರುವುದರಿಂದ ಅರ್ಜಿದಾರರಿಗೆ ಅನ್ಯಾಯವಾಗಿರುವ ಬಗ್ಗೆ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7. ಶ್ರೀ ವೆಂಕಟರಾವ್ ನಾಡಗೌಡ ಅವರು ಮುನಿರಾಬಾದ್(ಗಿಣಿಗೇರಾ)–ಮೆಹಬೂಬ್‌ನಗರ ಹೊಸ ರೈಲ್ವೆ ಮಾರ್ಗದ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಸ್ಥಳೀಯ ಜನರಿಗೆ ಅನುಕೂಲ ಕಲ್ಪಿಸಿಕೊಡುವ ಬಗ್ಗೆ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಮು.ತಿ.ನೋ.

8. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು ರಾಜ್ಯ ಸರ್ಕಾರವು ಬೆಂಗಳೂರಿನ ಸುತ್ತಮುತ್ತ ಟೌನ್‌ಶಿಪ್‌ಗಳನ್ನು ನಿರ್ಮಿಸಲು ಉದ್ದೇಶಿಸಿದ್ದು, ಅದರಲ್ಲಿ ಬಿಡದಿ ಟೌನ್‌ಶಿಪ್ ವಿಳಂಬವಾದಲ್ಲಿ, ಅದರ ವ್ಯಾಪ್ತಿಯಲ್ಲಿ ಬರುವ ರೈತರುಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಬಗ್ಗೆ ನಗರಾಭಿವೃದ್ಧಿ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಬೆಂಗಳೂರು ಜಲಮಂಡಳಿ ಸಚಿವರ ಗಮನ ಸೆಳೆಯುವುದು.

9. ಶ್ರೀ ಹೆಚ್.ಡಿ. ರೇವಣ್ಣ ಮತ್ತು ಇತರರು ಇಲಾಖೆಯಲ್ಲಿ ಸುಮಾರು 150 ಸಹಾಯಕ ವಿಭಾಗಾಧಿಕಾರಿ ಸಮಾನ ಹುದ್ದೆಗಳು ಖಾಲಿ ಇದ್ದು, ಈಗಾಗಲೇ ಅರ್ಹತೆಯನ್ನು ಪಡೆದಿರುವ ತಹಸೀಲ್ದಾರರಿಗೆ ಬಡ್ತಿಯನ್ನು ನೀಡುವ ವಿಷಯದ ಬಗ್ಗೆ ಅವರಿಗೆ (ಕೆ.ಎ.ಎಸ್. ಕಿರಿಯ ಶ್ರೇಣಿ) ಮಾನ್ಯತೆ ನೀಡಲು ಕಾನೂನು ಇಲಾಖೆಯಿಂದ ಸರ್ಕಾರಕ್ಕೆ ಅಭಿಪ್ರಾಯ ಬಂದಿರುವುದರಿಂದ ಕೂಡಲೇ ಸಹಾಯಕ ವಿಭಾಗಾಧಿಕಾರಿಗಳಾಗಿ ಬಡ್ತಿ ನೀಡುವ ವಿಷಯದ ಬಗ್ಗೆ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2012ರ ಜನವರಿ 30ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ"ಎಂದು ಮಾನ್ಯ ಸದಸ್ಯರಾದ ಶ್ರೀ ಡಿ.ಎಸ್. ಜೀವರಾಜ್ ಅವರು ದಿನಾಂಕ 2012ರ ಫೆಬ್ರವರಿ 3ರಂದು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರಿದ ಚರ್ಚೆ.

5. ಶಾಸನ ರಚನೆ

I. ವಿಧೇಯಕವನ್ನು ಮಂಡಿಸುವುದು

1) ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ)ವಿಧೇಯಕ, 2012
ಶ್ರೀ ಡಿ.ವಿ. ಸದಾನಂದ ಗೌಡ (ಮುಖ್ಯಮಂತ್ರಿಯವರು) ಅವರು:-

ಅ) 2011ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2011
ಶ್ರೀ ಗೋವಿಂದ ಎಂ. ಕಾರಜೋಳ, (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:–

ಅ) ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)